# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **235(194)**
ಸದಸ್ಯರ ಹೆಸರು : **ಶ್ರೀ. ಶಿವಣ್ಣ ಬಿ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು)**
ಉತ್ತರಿಸುವ ದಿನಾಂಕ : **18/08/2026**
ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ನಗರಾಭಿವೃದ್ಧಿ, ಪೌರಾಡಳಿತ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ (ಖಾಯಂ, ನೇರ ಪಾವತಿ ಹಾಗೂ ಗುತ್ತಿಗೆ ಹೊರಗುತ್ತಿಗೆ) ಪೌರಕಾರ್ಮಿಕರ ಮಕ್ಕಳಿಗೆ ಉನ್ನತ, ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣ ಸೇರಿದಂತೆ ಉಚಿತ ಶಿಕ್ಷಣ ನೀಡುವ ಯಾವುದೇ ವಿಶೇಷ ಯೋಜನೆ ಸರ್ಕಾರದ ಮುಂದಿದೆಯೇ; | ರಾಜ್ಯದ ನಗರಾಭಿವೃದ್ಧಿ, ಪೌರಾಡಳಿತ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವ ಯಾವುದೇ ವಿಶೇಷ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |
| ಆ | ಪ್ರಸ್ತುತ ಪೌರಕಾರ್ಮಿಕರ ಮಕ್ಕಳ ಶೈಕ್ಷಣಿಕ ಏಳಿಗೆಗಾಗಿ (ವಿದ್ಯಾರ್ಥಿವೇತನ, ಉಚಿತ ವಸತಿನಿಲಯ, ಶೈಕ್ಷಣಿಕ ಧನಸಹಾಯ ಇತ್ಯಾದಿ) ಸರ್ಕಾರ ಜಾರಿಗೆ ತಂದಿರುವ ಚಾಲ್ತಿ ಯೋಜನೆಗಳಾವುವು ಮತ್ತು ಕಳೆದ ಮೂರು ವರ್ಷಗಳಲ್ಲಿ ಇದರಿಂದ ಫಲಾನಾಭವಿಯಾದ ಮಕ್ಕಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) | **ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮದಡಿ ಶೇ.24.10 ಎಸ್‌ಸಿಎಸ್‌ಪಿ/ ಟಿ.ಎಸ್.ಪಿ. ಕಲ್ಯಾಣ ಕಾರ್ಯಕ್ರಮ ಯೋಜನೆಯಡಿ ಈ ಕೆಳಗಿನಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿರುವುದಾಗಿ ಪೌರಾಡಳಿತ ನಿರ್ದೇಶನಾಲಯದಿಂದ ಮಾಹಿತಿ ನೀಡಲಾಗಿರುತ್ತದೆ:**<br>ಎಸ್.ಎಫ್.ಸಿ. ಮುಕ್ತನಿಧಿಯ ಶೇ.24.10 ಎಸ್‌ಸಿಎಸ್ ಪಿ/ಟಿ.ಎಸ್.ಪಿ. ಕಲ್ಯಾಣ ಕಾರ್ಯಕ್ರಮದಡಿ ಲಭ್ಯವಾಗುವ ಒಟ್ಟು ಅನುದಾನದಲ್ಲಿ ಮೊದಲಿಗೆ ಶೇ.20 ರಷ್ಟು ಪೌರಕಾರ್ಮಿಕರ ಕಲ್ಯಾಣಕ್ಕೆ ನಂತರ ಉಳಿಯುವ ಒಟ್ಟು ಮೊತ್ತದಲ್ಲಿ ಶೇ.40 ರಷ್ಟು ಸಮುದಾಯ ಆದಾರಿತ ಕಲ್ಯಾಣ ಕಾರ್ಯಕ್ರಮ/ ಕಾಮಗಾರಿಗಳಿಗೆ ಹಾಗೂ ಶೇ.60 ರಷ್ಟು ವೈಯಕ್ತಿಕ ಸೌಲಭ್ಯದ ಕಾರ್ಯಕ್ರಮಗಳಿಗೆ ವೆಚ್ಚ ಮಾಡಲಾಗುತ್ತದೆ.<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಕಾರ್ಯಕ್ರಮ 24.10% ರ ನಿಧಿಯಡಿ ಲಭ್ಯವಾಗುವ |

| | | |
|---|---|---|
| | | ಒಟ್ಟು ನಿಧಿಯಲ್ಲಿ ಮೊದಲಿಗೆ ಪೌರ ಕಾರ್ಮಿಕರ ಕಲ್ಯಾಣ ಯೋಜನೆಗಳಿಗೆ ಶೇಕಡ 20 ರಷ್ಟನ್ನು ಕಡ್ಡಾಯವಾಗಿ ಮೀಸಲಿಡುವುದು. ಇದರಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾರ್ಯದಲ್ಲಿ ತೊಡಗುವ ಖಾಯಂ/ ಹೊರಗುತ್ತಿಗೆ ಪೌರ ಕಾರ್ಮಿಕರು/ ಲೋಡರ್ಸ್, ಡ್ರೈವರ್, ಸಫಾಯಿ ಕಾರ್ಮಚಾರಿ, ಸ್ಕ್ಯಾವೇಂಜರ್ಸ್‌ಗಳಿಗೆ ಮತ್ತು ಅವರ ಕುಟುಂಬ ವರ್ಗದವರಿಗೆ ಆರೋಗ್ಯ ತಪಾಸಣೆ, ವೈದ್ಯಕೀಯ ವೆಚ್ಚ ಮತ್ತು ಸುರಕ್ಷಾ ದಿರಿಸುಗಳು, ಮನೆ ನಿರ್ಮಾಣಕ್ಕೆ ಅಗತ್ಯವಾದ ನಿವೇಶನ ಖರೀದಿ ಮತ್ತು ಮನೆ ನಿರ್ಮಾಣಕ್ಕೆ ಗರಿಷ್ಠ ರೂ.3.00 ಲಕ್ಷದ ವರೆಗೆ ಮೀರದಂತೆ ಸಹಾಯಧನ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಅ) 60% ರಷ್ಟು ವೈಯಕ್ತಿಕ ಸೌಲಭ್ಯದ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಕಂಪ್ಯೂಟರ್, ಲ್ಯಾಪ್‌ಟಾಪ್ ಖರೀದಿಗೆ ಸಹಾಯಧನ ನೀಡಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ಸಹಕಾರ, ವೈದ್ಯ ವೃತ್ತಿ ಮತ್ತು ವಕೀಲ ವೃತ್ತಿ ಪ್ರಾರಂಭಿಸಲು ಪುಸ್ತಕ ಖರೀದಿಗೆ ಸಹಕಾರ, ರಾಜ್ಯ ರಾಷ್ಟ್ರೀಯ ಮಟ್ಟದ ಕ್ರೀಡೆ/ಕಲೆ/ಸಾಂಸ್ಕೃತಿಕ ಹಾಗೂ ಇತರೆ ವ್ಯಾಸಂಗೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಕೌಶಲ್ಯ ತರಬೇತಿ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಆ) 40% ರಷ್ಟು ಸಮುದಾಯ ಆದಾರಿತ ಕಲ್ಯಾಣ ಕಾರ್ಯಕ್ರಮದಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮಕ್ಕಳ ವಿದ್ಯಾರ್ಥಿನಿಲಯಗಳ ಉನ್ನತೀಕರಣಕ್ಕೆ ಸಹಕಾರ, ಗ್ರಂಥಾಲಯಗಳನ್ನು ನಿರ್ಮಿಸಿ ಗ್ರಂಥಾಲಯಗಳ ಬಳಕೆಗೆ ಉತ್ತೇಜನ, ಕಾನೂನು ಇಲಾಖೆಯ ಸಹಕಾರದೊಂದಿಗೆ ಕಾನೂನು ಅರಿವಿನ ಜಾಗೃತಿ ಶಿಬಿರಗಳ ಆಯೋಜನೆಗೆ ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಪೌರಕಾರ್ಮಿಕರ ಮಕ್ಕಳ ಶೈಕ್ಷಣಿಕ ಏಳಿಗೆಗಾಗಿ (ವಿದ್ಯಾರ್ಥಿವೇತನ, ಉಚಿತ ವಸತಿನಿಲಯ, ಶೈಕ್ಷಣಿಕ |

| | | |
|---|---|---|
| | | ಧನಸಹಾಯ ಇತ್ಯಾದಿ) ಕ್ಕೆ ಸಂಬಂದಪಟ್ಟಂತೆ ಯಾವುದೇ ಯೋಜನೆಗಳು ಚಾಲ್ತಿಯಲ್ಲಿರುವುದಿಲ್ಲ. |
| ಇ | ಪೌರ ಕಾರ್ಮಿಕರ ಮಕ್ಕಳಿಗೆ ಸರ್ಕಾರಿ ಉದ್ಯೋಗ ನೇಮಕಾತಿಗಳಲ್ಲಿ ಹಾಗೂ ಶೈಕ್ಷಣಿಕ ಪ್ರವೇಶಾತಿಗಳಲ್ಲಿ ಪ್ರತ್ಯೇಕ ಮೀಸಲಾತಿ ಅಥವಾ ವಿಶೇಷ ಆದ್ಯತೆ/ಸಡಿಲಿಕೆ ನೀಡುವ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲನೆ ನಡೆಸಲಾಗಿದೆಯೇ; | ಪೌರ ಕಾರ್ಮಿಕರ ಮಕ್ಕಳಿಗೆ ನೇಮಕಾತಿ ಹಾಗೂ ಶೈಕ್ಷಣಿಕ ಪ್ರವೇಶಾತಿಯಲ್ಲಿ ಪ್ರತ್ಯೇಕ ಮೀಸಲಾತಿ ಅಥವಾ ವಿಶೇಷ ಆದ್ಯತೆ/ಸಡಿಲಿಕೆ ನೀಡುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ. |
| ಈ | ಹಾಗಿದ್ದಲ್ಲಿ, ಈ ಕುರಿತು ಸಚಿವ ಸಂಪುಟ ಅಥವಾ ಪೌರಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಏನಾದರೂ ನಿರ್ಧಾರ/ಮಾರ್ಗಸೂಚಿ ರೂಪಿಸಲಾಗಿದೆಯೇ; ಇಲ್ಲದಿದ್ದಲ್ಲಿ ಈ ಸಮುದಾಯದ ಸಾಮಾಜಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರ ಕೈಗೊಳ್ಳಲಿರುವ ನೂತನ ಕ್ರಮಗಳೇನು (ಸಂಪೂರ್ಣವಾದ ವಿವರ ನೀಡುವುದು)? | |

**ಸಂಖ್ಯೆ:ನಅಇ 36 ಎಲ್‌ಸಿಕ್ಯೂ 2026**

(ಹೆಚ್ ಸಿ ಬಾಲಕೃಷ್ಣ)
**ಪೌರಾಡಳಿತ ಸಚಿವರು**